# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೈದನೆಯ ಅಧಿವೇಶನ

**ಕಾರ್ಯಕಲಾಪಗಳ ಪಟ್ಟಿ**

ಬುಧವಾರ, ದಿನಾಂಕ:11ನೇ ಜುಲೈ, 2018
(ಸಮಯ: ಬೆಳಗ್ಗೆ 11.00 ಗಂಟೆಗೆ)

* * *

## 01. ಪ್ರಶ್ನೋತ್ತರ

ಅ. ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

ಆ **ತಡೆಹಿಡಿಯಲಾದ ಪ್ರಶ್ನೆ:**

ಎರಡನೆಯ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಆರ್. ಪ್ರಸನ್ನಕುಮಾರ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 25(134) : **ನಗರಾಭಿವೃದ್ಧಿ ಮತ್ತು ವಸತಿ** ಸಚಿವರು

ಇ. ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೂರನೆಯ ಪಟ್ಟಿ

## 02. ವರದಿಗಳನ್ನೊಪ್ಪಿಸುವುದು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ** (ಸದಸ್ಯರು, ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿ) ಅವರು **ಅರ್ಜಿಗಳ ಸಮಿತಿಯ** 2014-2015, 2015-2016 ಹಾಗೂ 2016-2017ನೇ ಸಾಲಿನ 24, 25 ಹಾಗೂ 26ನೇ ವರದಿಗಳನ್ನು ಒಪ್ಪಿಸುವುದು.

## 03. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಬಸವರಾಜ ಪಾಟೀಲ್ ಇಟಗಿ** ಅವರು ರಾಯಚೂರು ವೈದ್ಯಕೀಯ ವಿಜ್ಞಾನ ಸಂಸ್ಥೆಯಲ್ಲಿನ ಸಿಬ್ಬಂದಿಗಳ ಕೊರತೆಯನ್ನು ನೀಗಿಸುವ ಬಗ್ಗೆ **ಮಾನ್ಯ ಬೃಹತ್ ಮತ್ತು ಮಧ್ಯಮ ನೀರಾವರಿ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ** ಗಮನ ಸೆಳೆಯುವುದು.

....2

ಆ) **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ಮುಜರಾಯಿ ಇಲಾಖೆಯಲ್ಲಿ ಹಲವಾರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ನೌಕರರುಗಳ ವೇತನ ಪರಿಷ್ಕರಣೆ, ಭತ್ಯೆ ಹಾಗೂ ಮತ್ತಿತರ ಸೌಲಭ್ಯಗಳನ್ನು ಕಲ್ಪಿಸುವ ಹಾಗೂ ತಾತ್ಕಾಲಿಕ ನೌಕರರನ್ನು ಖಾಯಂಗೊಳಿಸುವ ಬಗ್ಗೆ **ಮಾನ್ಯ ಗಣಿ ಮತ್ತು ಭೂವಿಜ್ಞಾನ ಹಾಗೂ ಮುಜರಾಯಿ ಸಚಿವರ** ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

ಅ) **ಶ್ರೀಮತಿ ತಾರಾಅನೂರಾಧ** ಅವರು ರಾಜ್ಯದಲ್ಲಿ ಕಬಿನಿ ಸುತ್ತಮುತ್ತಲಿನ ಅರಣ್ಯ ಪ್ರದೇಶದಲ್ಲಿ ವಾಸವಾಗಿರುವ ಕಾಡು ಜನರು ಮತ್ತು ಆದಿವಾಸಿಗಳ ಜೀವನ, ಅಧಿಕಾರಿ ವರ್ಗದವರ ಕಿರುಕುಳದಿಂದ ಶೋಚನೀಯ ಸ್ಥಿತಿಯಲ್ಲಿದ್ದು, ಇವರುಗಳಿಗೆ ಆಶ್ರಯ/ಭದ್ರತೆ ಒದಗಿಸುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು)**

ಆ) **ಡಾ. ತೇಜಸ್ವಿನಿ ಗೌಡ** ಅವರು ರಾಜ್ಯಾದ್ಯಂತ ಅವ್ಯಾಹತವಾಗಿ ನಡೆಯುತ್ತಿರುವ 'ಲವ್ ಜಿಹಾದ್'ನ ಉಪಟಳದಿಂದ ಉಂಟಾಗಿರುವ ತೊಂದರೆಗಳ ಕುರಿತು ಕ್ರಮಕೈಗೊಳ್ಳುವ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಉಪ ಮುಖ್ಯಮಂತ್ರಿಯವರು)**

## 05. ವಿತ್ತೀಯ ಕಾರ್ಯಕಲಾಪ

2018-2019ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ.

**(ಮೂರನೇ ದಿನ)**

## 06. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅಕ್ರಮ ಔಷಧಿಗಳ ಮಾರಾಟಕ್ಕೆ ಸಂಬಂಧಿಸಿದಂತೆ ದಿನಾಂಕ:09.07.2018ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:2(01)ಕ್ಕೆ** ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀಮತಿ ತಾರಾಅನೂರಾಧ** ಅವರಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ.**

---

ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
**www.kla.kar.nic.in/council.htm**